<u>ಕರ್ನಾಟಕ ಸರ್ಕಾರ</u>

ಸಂಖ್ಯೆ: ಗ್ರಾಅಪ 578 ಗ್ರಾಪಂಕಾ 2015

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ:22.12.2018

ಇವರಿಂದ:

ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಗ್ರಾಮೀಣ ಅಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
ಬೆಂಗಳೂರು.

**<u>ತುರ್ತು</u>**

ಇವರಿಗೆ:

ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
ಜಿಲ್ಲಾ ಪಂಚಾಯತಿ.

ಮಾನ್ಯರೆ,

ವಿಷಯ: ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಮತ್ತು ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇಡ್-1 ಹುದ್ದೆಗಳಿಗೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಿ ಪರಿಷ್ಕೃತ ಆಯ್ಕೆ ಪಟ್ಟಿ ಪ್ರಕಟಿಸಿರುವ ಬಗ್ಗೆ.

ಉಲ್ಲೇಖ:
1. ಕಾರ್ಯನಿರ್ವಾಹಕ ನಿರ್ದೇಶಕರು,ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಇವರ ಪತ್ರ ಸಂಖ್ಯೆ ಇಡಿ/ಕೆಇಎ/ಆಡಳಿತ/ಸಿಆರ್-06/2015-16, ದಿನಾಂಕ 03.03.2018.
2. ಸರ್ಕಾರದ ಸಮಸಂಖ್ಯೆಯ ಪತ್ರ, ದಿನಾಂಕ: 05.03.2018.
3. ಕಾರ್ಯನಿರ್ವಾಹಕ ನಿರ್ದೇಶಕರು,ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಇವರ ಪತ್ರ ಸಂಖ್ಯೆ ಕೆಇಎ.ಆರ್.ಇ.ಸಿ.ಟಿ.73/2018, ದಿನಾಂಕ:12.12.2018.

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖ (1) ರಂತೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಮತ್ತು ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇಡ್-1 ಹುದ್ದೆಗಳಿಗೆ ಸ್ಪರ್ಧಾತ್ಮಕ ಪರೀಕ್ಷೆ ಮೂಲಕ ಆಯ್ಕೆ ಮಾಡಿ ಅಂತಿಮ ಆಯ್ಕೆ ಪಟ್ಟಿಗಳನ್ನು ಸರ್ಕಾರಕ್ಕೆ ಕಳುಹಿಸಿತ್ತು. ಸದರಿ ಆಯ್ಕೆ ಪಟ್ಟಿಗಳ ಅನುಸಾರ ಅಭ್ಯರ್ಥಿಗಳನ್ನು ನೇಮಕಾತಿ ಮಾಡಲು ಉಲ್ಲೇಖ (2) ರ ಸರ್ಕಾರದ ಪತ್ರದಲ್ಲಿ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸೂಚಿಸಲಾಗಿತ್ತು. ಈ ಪೈಕಿ ಅಂಗವಿಕಲ ಕೋಟಾದಡಿ ಆಯ್ಕೆ ಹೊಂದಲು ಬಾಕಿ ಉಳಿದಿದ್ದ 44 ಅಭ್ಯರ್ಥಿಗಳನ್ನು (ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದದಲ್ಲಿ 8 ಮತ್ತು ಗ್ರೇಡ್-1 ಗ್ರಾಮ ಪಂಚಾಯತಿ ಕಾರ್ಯದರ್ಶಿ ವೃಂದದಲ್ಲಿ 36 ಹುದ್ದೆಗಳು) ಆಯ್ಕೆ ಮಾಡಿ ಪರಿಷ್ಕೃತ ಆಯ್ಕೆ ಪಟ್ಟಿಯನ್ನು ದಿನಾಂಕ 07.12.2018 ರಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವೆಬ್‌ಸೈಟ್ <u>http://kea.kar.nic.in</u> ನಲ್ಲಿ ಪ್ರಕಟಿಸಲಾಗಿದೆ. ಈ ಆಯ್ಕೆ ಪಟ್ಟಿಗಳನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಧಿಕೃತ ವೆಬ್‌ಸೈಟ್‌ನಲ್ಲಿ ಸಹ ಪ್ರಕಟಿಸಲಾಗಿದೆ.

ಈ ಸಂಬಂಧ ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಇವರು ಸರ್ಕಾರಕ್ಕೆ ಬರೆದಿರುವ ದಿನಾಂಕ 12.12.2018 ರ ಪತ್ರದ ಪ್ರತಿಯನ್ನು ಲಗತ್ತಿಸಿ ಕಳುಹಿಸುತ್ತಾ ಪರಿಷ್ಕೃತ ಆಯ್ಕೆ ಪಟ್ಟಿಯ ಅನುಸಾರ ಪ್ರಸ್ತುತ ಹೊಸದಾಗಿ ಸೇರ್ಪಡೆ ಹೊಂದಿರುವ ಅಭ್ಯರ್ಥಿಗಳನ್ನು ಮಾತ್ರ ನೇಮಕಾತಿ ಮಾಡಿಕೊಳ್ಳಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವೆಬ್‌ಸೈಟ್‌ನಿಂದ ಪ್ರತಿಗಳನ್ನು Download ಮಾಡಿಕೊಂಡು ಈ ಕೆಳಕಂಡಂತೆ ಕ್ರಮವಹಿಸುವಂತೆ ಎಲ್ಲಾ ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ತಿಳಿಸಿದೆ.

1. ಅಂಗವಿಕಲ ಮೀಸಲಾತಿಯಡಿ ಆಯ್ಕೆಯಾದ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ ವೈದ್ಯಕೀಯ ಪರೀಕ್ಷೆಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ವೈದ್ಯಕೀಯ ಮಂಡಳಿಯಿಂದ ಮಾಡಿಸಿರುವುದರಿಂದ ಮತ್ತೊಮ್ಮೆ ವೈದ್ಯಕೀಯ ಪರೀಕ್ಷೆ ನಡೆಸುವ ಅವಶ್ಯಕತೆ ಇರುವುದಿಲ್ಲ. ವೈದ್ಯಕೀಯ ಮಂಡಳಿ ನೀಡಿರುವ ಪ್ರಮಾಣ ಪತ್ರಗಳನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಪಡೆದು ಅವುಗಳನ್ನು ಪರಿಗಣಿಸುವುದು.
2. ಈ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡುವ ಮುನ್ನ ನಡತೆ ಮತ್ತು ಪೂರ್ವ ಚರಿತ್ರೆಯ ಬಗ್ಗೆ ಪೊಲೀಸ್ ವರದಿ ಪಡೆಯಲು ಹಾಗೂ ಅವಶ್ಯವಿರುವ ಕಡೆ ಸಿಂಧುತ್ವ ಪ್ರಮಾಣ ಪತ್ರ ಪಡೆಯಲು ಸಂಬಂಧಪಟ್ಟ ಪ್ರಾಧಿಕಾರಿಗಳಿಗೆ ಪತ್ರ ಬರೆಯುವುದು. ಹಾಗೂ ತ್ವರಿತವಾಗಿ ಈ ಪ್ರಮಾಣ ಪತ್ರವನ್ನು ಪಡೆದುಕೊಳ್ಳಲು ಕ್ರಮವಹಿಸುವುದು.
3. ವಿದ್ಯಾರ್ಹತೆ ಹಾಗೂ ಮೀಸಲಾತಿಗೆ ಸಂಬಂಧಿಸಿದ ಮೂಲದಾಖಲಾತಿಗಳನ್ನು ಪಡೆದು ಪರಿಶೀಲಿಸುವುದು.
4. ಸಿಂಧುತ್ವ ಪ್ರಮಾಣ ಪತ್ರ ಅನ್ವಯಿಸದಿರುವ ಅಭ್ಯರ್ಥಿಗಳಿಗೆ ಪೊಲೀಸ್ ವರದಿ ಪಡೆದು ಇತರೆ ದಾಖಲಾತಿಗಳನ್ನು ಪರಿಶೀಲಿಸಿ ಕೂಡಲೆ ನೇಮಕಾತಿ ಆದೇಶ ಹೊರಡಿಸುವುದು. ಉಳಿದ ಅಭ್ಯರ್ಥಿಗಳಿಗೆ ಸಿಂಧುತ್ವ ಪ್ರಮಾಣ ಪತ್ರ ಸ್ವೀಕರಿಸಿದ ನಂತರ ನೇಮಕಾತಿ ಆದೇಶ ಹೊರಡಿಸುವುದು. ಸಿಆಸು ಇಲಾಖೆಯು ದಿನಾಂಕ 15.02.2018 ರಂದು ಹೊರಡಿಸಿರುವ ಸುತ್ತೋಲೆಯ ಅನುಸಾರ ಈ ಕಾರಣದಿಂದ ಇವರ ಜೇಷ್ಠತೆಯಲ್ಲಿ ಯಾವುದೇ ವ್ಯತ್ಯಾಸವಾಗುವುದಿಲ್ಲ.
5. ನೇಮಕಾತಿ ಹೊಂದಿದ ಅಭ್ಯರ್ಥಿಗಳನ್ನು ಖಾಲಿ ಇರುವ ಗ್ರಾಮಪಂಚಾಯಿತಿಗಳಿಗೆ ಕೌನ್ಸಿಲಿಂಗ್ ಮುಖಾಂತರ ನೇಮಕಾತಿ ಮಾಡಿ ಕಾರ್ಯವರದಿ ಮಾಡಿಕೊಳ್ಳಲು ವ್ಯವಸ್ಥೆ ಮಾಡುವುದು.
6. ನಂತರ ಅಭ್ಯರ್ಥಿಗಳನ್ನು 8 ವಾರಗಳ ತರಬೇತಿಗೆ ನಿಯೋಜಿಸುವುದು.
7. ತರಬೇತಿಯನ್ನು ಅಬ್ದುಲ್ ನಜೀರ್ ಸಾಬ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ ಮೈಸೂರು ಇವರಿಂದ ನೀಡಲಾಗುವುದು.
8. ಜಿಲ್ಲೆಗೆ ಆಯ್ಕೆಗೊಂಡು ನೇಮಕಾತಿ ಹೊಂದಿದ ಎಲ್ಲಾ ಅಭ್ಯರ್ಥಿಗಳ ಜೇಷ್ಠತೆಯನ್ನು ಈ ಪರಿಷ್ಕೃತ ಆಯ್ಕೆ ಪಟ್ಟಿಗಳ ಅನುಸಾರ ಪರಿಗಣಿಸುವುದು.
9. ಚುಕ್ಕೆ ಗುರುತಿರುವ ಅಭ್ಯರ್ಥಿಗಳಿಗೆ ಸಂಬಂಧಪಟ್ಟಂತೆ ಮುಂದಿನ ಸೂಚನೆಯನ್ನು ನಿರೀಕ್ಷಿಸುವುದು.

ಮೇಲಿನಂತೆ ಕೈಗೊಂಡ ಕ್ರಮವನ್ನು ಸರ್ಕಾರಕ್ಕೆ ವರದಿ ಮಾಡುವುದು.

22/12/18

(ಎಂ.ಕೆ. ಕೆಂಪೇಗೌಡ )
ನಿರ್ದೇಶಕರು (ಪಂ.ರಾಜ್-1) ಹಾಗೂ ಪದನಿಮಿತ್ತ
ಸರ್ಕಾರದ ಜಂಟಿ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ